<u>ಕರ್ನಾಟಕ ವಿಧಾನ ಪರಿಷತ್ತು</u>

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: | 868 |
| ಮಾನ್ಯ ಸದಸ್ಯರ ಹೆಸರು | ಶ್ರೀ ಎಸ್. ರುದ್ರೇಗೌಡ (ವಿಧಾನ ಸಭೆಯಿಂದ ಚುನಾಯಿತರಾದವರು) |
| ಉತ್ತರಿಸಬೇಕಾದ ದಿನಾಂಕ | 18-12-2018 |
| ಉತ್ತರಿಸಬೇಕಾದ ಸಚಿವರು | ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು |

| ಕ್ರ. ಸಂ. | ಪ್ರಶ್ನೆ | ಉತ್ತ |
|---|---|---|
| ಅ) | ರಾಜ್ಯದಲ್ಲಿ ಶೇ. 16 ರಷ್ಟು ಜನರು ಹೃದಯಘಾತ, ಪಾರ್ಶ್ವವಾಯು ಹಾಗೂ ಸಿವಿಡಿ ಸಮಸ್ಯೆಯಿಂದ ಬಳಲುತ್ತಿದ್ದು ಈ ಕುರಿತು ಸರ್ಕಾರ ಕೈಗೊಂಡ ಕ್ರಮಗಳೇನು; | • ರಾಜ್ಯದ 30 ಜಿಲ್ಲೆಗಳಲ್ಲಿ ಅಸಾಂಕ್ರಾಮಿಕ ರೋಗಗಳ ನಿಯಂತ್ರಣ ಕಾರ್ಯಕ್ರಮದ ಮೂಲಕ ಸುವರ್ಣ ಆರೋಗ್ಯ ಟ್ರಸ್ಟ್ ಇವರ ಸಹಭಾಗಿತ್ವದಲ್ಲಿ ಪ್ರತಿ ತಿಂಗಳು ಆರೋಗ್ಯ ತಪಾಸಣ ಶಿಬಿರಗಳನ್ನು ತಾಲ್ಲೂಕು ಹಾಗೂ ಜಿಲ್ಲಾ ಮಟ್ಟದಲ್ಲಿ ಮಾಡಲಾಗುತ್ತಿದ್ದು, ಪ್ರಾಥಮಿಕ ಹಂತದಲ್ಲೇ ಹೃದಯಘಾತ, ಪಾರ್ಶ್ವವಾಯು ಹಾಗೂ ಸಿ.ವಿ.ಡಿ ಪ್ರಕರಣಗಳನ್ನು ಗುರುತಿಸಿ ಮೇಲ್ದರ್ಜೆ ಆಸ್ಪತ್ರೆಗಳಲ್ಲಿ ಹೆಚ್ಚಿನ ಚಿಕಿತ್ಸೆಗೆ ಕಳುಹಿಸಲಾಗುತ್ತಿದೆ.<br>• 6 ಆಯ್ದ ಜಿಲ್ಲೆಗಳಲ್ಲಿ (ಚಿಕ್ಕಮಗಳೂರು, ಗದಗ, ಮೈಸೂರು, ರಾಯಚೂರು, ಹಾವೇರಿ ಹಾಗೂ ಉಡುಪಿ) ಜನಸಂಖ್ಯಾ ಆಧಾರಿತ ತಪಾಸಣಾ ಕಾರ್ಯಕ್ರಮವನ್ನು ಪ್ರಾಯೋಗಿಕವಾಗಿ ಪ್ರತಿ ಜಿಲ್ಲೆಯ 10 ಉಪ ಕೇಂದ್ರಗಳಲ್ಲಿ ಆರಂಭಿಸಿದ್ದು, ಮನೆ ಮನೆ ಭೇಟಿ ನೀಡಿ, ಪ್ರಾಥಮಿಕ ಹಂತದಲ್ಲೇ ಪ್ರಕರಣಗಳನ್ನು ಗುರುತಿಸಿ, ತಪಾಸಣೆ ಹಾಗೂ ಚಿಕಿತ್ಸೆ ವ್ಯವಸ್ಥೆಯನ್ನು ಮಾಡಿ ಕೊಡಲಾಗುತ್ತಿದೆ. ಇನ್ನುಳಿದ 24 ಜಿಲ್ಲೆಗಳಲ್ಲಿ ಈ ಕಾರ್ಯಕ್ರಮವನ್ನು ಮಾರ್ಚ್ 2019ರೊಳಗೆ ವಿಸ್ತರಿಸಲು ಕ್ರಮವಹಿಸಲಾಗಿದೆ.<br>• ರಾಷ್ಟ್ರೀಯ ತಂಬಾಕು ನಿಯಂತ್ರಣ ಕಾರ್ಯಕ್ರಮದಡಿಯಲ್ಲಿ ತಂಬಾಕು ಉತ್ಪನ್ನಗಳ ಸೇವನೆಯಿಂದಾಗುವ ದುಷ್ಪರಿಣಾಮಗಳ ಬಗ್ಗೆ ಅರಿವು ಮೂಡಿಸಲು ಎಲ್ಲಾ 30 ಜಿಲ್ಲೆಗಳ ಶಾಲಾ- ಕಾಲೇಜುಗಳಲ್ಲಿ ಕಾರ್ಯಕ್ರಮವನ್ನು ಕೈಗೊಳ್ಳಲಾಗಿದೆ. ಎಲ್ಲಾ 30 ಜಿಲ್ಲೆಗಳಲ್ಲಿ ತಂಬಾಕು ವ್ಯಸನ ಮುಕ್ತ ಕೇಂದ್ರಗಳನ್ನು ರಚಿಸಿ ಆಪ್ತಸಮಾಲೋಚನೆ ಹಾಗೂ ಚಿಕಿತ್ಸೆಯನ್ನು ನೀಡಲಾಗುತ್ತಿದೆ.<br>• IEC ಕಾರ್ಯಕ್ರಮದಡಿಯಲ್ಲಿ ಜಿಲ್ಲೆಗಳಲ್ಲಿ ಗೋಡೆ ಬರಹ, ಭಿತ್ತಿ ಪತ್ರಗಳು, ಕರಪತ್ರಗಳು, ಬೀದಿನಾಟಕಗಳು, ಸಮೂಹ ಮಾಧ್ಯಮಗಳ ಮೂಲಕ ಜಾಗೃತಿ ಕಾರ್ಯಕ್ರಮವನ್ನು ಹಮ್ಮಿಕೊಂಡು ಅರಿವು ಮೂಡಿಸಲಾಗುತ್ತಿದೆ.<br>• ಹೃದಯಘಾತ, ಪಾರ್ಶ್ವವಾಯು ಹಾಗೂ ಸಿವಿಡಿ ಚಿಕಿತ್ಸೆಗೆ ಸಂಯೋಜಿತ ಆಯುಷ್ಮಾನ್ ಭಾರತ್ - ಆರೋಗ್ಯ ಕರ್ನಾಟಕ ಅಡಿಯಲ್ಲಿ ಅರ್ಹ ರೋಗಿಗಳಿಗೆ (ಬಿಪಿಎಲ್) ಚಿಕಿತ್ಸಾ ಸೌಲಭ್ಯಕ್ಕಾಗಿ ಪ್ಯಾಕೇಜ್‌ಗಳು ಲಭ್ಯವಿದ್ದು ಶಸ್ತ್ರ ಚಿಕಿತ್ಸೆ, ರೇಡಿಯೋಥೆರಪಿ ಹಾಗೂ ಕೀಮೋಥೆರಪಿಗಾಗಿ ಸರ್ಕಾರಿ ಸ್ವಾಮ್ಯದ ಆಸ್ಪತ್ರೆಗಳಲ್ಲಿ ಅಥವಾ ಖಾಸಗಿ ನೋಂದಾಯಿತ ಆಸ್ಪತ್ರೆಗಳಲ್ಲಿ ರೂ. 5.00 ಲಕ್ಷದವರೆಗೆ ಚಿಕಿತ್ಸಾ ಪ್ಯಾಕೇಜ್‌ಗಳು ಲಭ್ಯವಿದೆ.<br>• ಸಾಮಾನ್ಯ ವರ್ಗದ ರೋಗಿಗಳಿಗೆ ಶೇಕಡಾ 30 ರಷ್ಟು ದರದಲ್ಲಿ ರೂ. 1.50 ಲಕ್ಷದವರೆಗೆ ಹೃದಯಘಾತ, ಪಾರ್ಶ್ವವಾಯು ಹಾಗೂ ಸಿವಿಡಿ ಚಿಕಿತ್ಸಾ ಪ್ಯಾಕೇಜ್‌ಗಳು ಲಭ್ಯವಿದೆ. |
| ಆ) | ದಕ್ಷಿಣ ಭಾರತ ರಾಜ್ಯಗಳಲ್ಲಿ ಹೃದಯ ರಕ್ತನಾಳ ಸಂಬಂಧಿ ಕಾಯಿಲೆ (Cardio Vascular Diseases) ಪ್ರಮಾಣ ಅಪಾಯಕಾರಿ ಮಟ್ಟದಲ್ಲಿ ಇರುವುದಾಗಿ ಹೊಸ ಅಧ್ಯಯನವೊಂದು ವರದಿಯಲ್ಲಿ ತಿಳಿಸಿದ್ದು, ಈ ವರದಿಯಲ್ಲಿ ಉಲ್ಲೇಖಿಸಿರುವಂತೆ ಕರ್ನಾಟಕದಲ್ಲಿ ಶೇ16 ರಷ್ಟು ಹೃದಯಘಾತ ಪಾರ್ಶ್ವವಾಯು ಹಾಗೂ ಸಿವಿಡಿ ಸಮಸ್ಯೆಯಿಂದ ಬಳಲುತ್ತಿರುವುದರಿಂದ ಈ ಕುರಿತು ಸರ್ಕಾರ ಕೈಗೊಂಡ ಕ್ರಮಗಳೇನು; | |

| | | |
|---|---|---|
| ಇ) | ರಾಜ್ಯದ ಜಿಲ್ಲಾ ಹಾಗೂ ತಾಲ್ಲೂಕು ಆರೋಗ್ಯ ಕೇಂದ್ರಗಳ ಸಂಖ್ಯೆ ಎಷ್ಟು; ಸಿಬ್ಬಂದಿಯ ಬೇಡಿಕೆ ಹಾಗೂ ಲಭ್ಯತೆ ಎಷ್ಟು ಕೊರತೆಯನ್ನು ನೀಗಿಸಲು ಕೈಗೊಂಡ ಕ್ರಮಗಳೇನು? (ಜಿಲ್ಲಾವಾರು ಮತ್ತು ತಾಲ್ಲೂಕುವಾರು ಮಾಹಿತಿ ನೀಡುವುದು) | ರಾಜ್ಯದ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳು ಇವರ ಅಧಿನದಲ್ಲಿ ಬರುವ ಜಿಲ್ಲಾ ಆಸ್ಪತ್ರೆಗಳು –15, ಹಾಗೂ ತಾಲ್ಲೂಕು ಆಸ್ಪತ್ರೆಗಳು –146.<br><br>ಸಿಬ್ಬಂದಿಗಳ ಕೊರತೆ ನೀಗಿಸಲು ತೆಗೆದುಕೊಂಡ ಕ್ರಮದ ಬಗ್ಗೆ ಅನುಬಂಧದಲ್ಲಿ ನೀಡಲಾಗಿದೆ. |

ಸಂಖ್ಯೆ: ಆಕುಕ 868 ಚು.ರ. 2018

(ಶಿವಾನಂದ ಎಸ್. ಪಾಟೀಲ್)
ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು

## ಅನುಬಂಧ

## ಇಲಾಖೆಯಲ್ಲಿ ಖಾಲಿ ಇರುವ ಹುದ್ದೆಗಳನ್ನು ಭರ್ತಿ ಮಾಡಲು ಈ ಕೆಳಕಂಡಂತೆ ಕ್ರಮ ಕೈಗೊಳ್ಳಲಾಗಿದೆ.

- ಇಲಾಖೆಯಲ್ಲಿ ಖಾಲಿ ಇರುವ 365+111=476 (ಈ ಪೈಕಿ 111–ಹೈ–ಕರ್ನಾಟಕ) ಸಾಮಾನ್ಯ ಕರ್ತವ್ಯ ವೈದ್ಯಾಧಿಕಾರಿಗಳನ್ನು ಕರ್ನಾಟಕ ಲೋಕಸೇವಾ ಆಯೋಗದ ಮೂಲಕ ಭರ್ತಿ ಮಾಡಲು ಕೋರಲಾಗಿತ್ತು, ಆದರೆ 457 ಸಾಮಾನ್ಯ ಕರ್ತವ್ಯ ವೈದ್ಯಾಧಿಕಾರಿಗಳ ಅಂತಿಮ ಪಟ್ಟಿ ಪ್ರಕಟಣೆಗೊಂಡಿದ್ದು, ಆದರಲ್ಲಿ 260 ಸಾಮಾನ್ಯ ಕರ್ತವ್ಯ ವೈದ್ಯಾಧಿಕಾರಿಗಳು ಕೌನ್ಸಿಲಿಂಗ್‌ಗೆ ಹಾಜರಾಗಿದ್ದು, ಈ ಪೈಕಿ 255 ವೈದ್ಯರು ನೇಮಕಾತಿ ಆದೇಶ ಪಡೆದು, ದಿನಾಂಕ: 04–09–2018 ರಿಂದ 230 ಸಾಮಾನ್ಯ ಕರ್ತವ್ಯ ವೈದ್ಯಾಧಿಕಾರಿಗಳು ಪ್ರಸುತ ಕಾರ್ಯನಿರ್ವಹಿಸುತ್ತಿದ್ದಾರೆ.

- ಇಲಾಖೆಯಲ್ಲಿ ಖಾಲಿ ಇರುವ 1065 ತಜ್ಞ ವೈದ್ಯರನ್ನು ಕರ್ನಾಟಕ ಲೋಕಸೇವಾ ಆಯೋಗದ ಮೂಲಕ ಭರ್ತಿ ಮಾಡಲು ಕೋರಲಾಗಿತ್ತು, ಆದರೆ 382 ತಜ್ಞ ವೈದ್ಯರ ಅಂತಿಮ ಪಟ್ಟಿ ಪ್ರಕಟಣೆಗೊಂಡಿದ್ದು, ಆದರಲ್ಲಿ 265 ತಜ್ಞ ವೈದ್ಯರು ಕೌನ್ಸಿಲಿಂಗ್‌ಗೆ ಹಾಜರಾಗಿದ್ದು, ಈ ಪೈಕಿ 255 ತಜ್ಞ ವೈದ್ಯರು ನೇಮಕಾತಿ ಆದೇಶ ಪಡೆದು, ದಿನಾಂಕ: 16–07–2018 ರಿಂದ 156 ತಜ್ಞ ವೈದ್ಯರು ಪ್ರಸುತ ಕಾರ್ಯನಿರ್ವಹಿಸುತ್ತಿದ್ದಾರೆ.

- ವೈದ್ಯರ ನೇಮಕಾತಿ ಸಮಾಲೋಚನೆ ನಂತರ ಹೆಚ್ಚಿನ ವೈದ್ಯರು ಕರ್ತವ್ಯಕ್ಕೆ ವರದಿ ಮಾಡಿಕೊಳ್ಳದೆ ಇರುವುದರಿಂದ ಕೆಪಿಎಸ್‌ಸಿ ಯಿಂದ ತಜ್ಞ ವೈದ್ಯರು ಮತ್ತು ಸಾ.ಕ.ವೈದ್ಯಾಧಿಕಾರಿಗಳ ಹೆಚ್ಚುವರಿ ಪಟ್ಟಿಯನ್ನು ಕಳುಹಿಸಿಕೊಡುವಂತೆ ಕರ್ನಾಟಕ ಲೋಕಸೇವಾ ಆಯೋಗಕ್ಕೆ ದಿ:01.12.2018 ರಂದು ಪತ್ರ ಬರೆಯಲಾಗಿದೆ.

- ಇಲಾಖೆಯಲ್ಲಿ ತಜ್ಞರು ಹಾಗೂ ವೈದ್ಯಾಧಿಕಾರಿಗಳ ಕೊರತೆ ಇರುವುದರಿಂದ ಎಲ್ಲಾ ಹುದ್ದೆಗಳನ್ನು ಭರ್ತಿ ಮಾಡಲು ಸಾಧ್ಯವಾಗಿರುವುದಿಲ್ಲ. ಖಾಲಿ ಇರುವ ಹುದ್ದೆಗಳನ್ನು ನೇರ ನೇಮಕಾತಿ ಮೂಲಕ ಭರ್ತಿ ಮಾಡಲು ಕಾಲಕಾಲಕ್ಕೆ ಕ್ರಮ ಕೈಗೊಳ್ಳಲಾಗುತ್ತಿದೆ.

- ಖಾಲಿ ಇರುವ ತಜ್ಞ ವೈದ್ಯರನ್ನು ಎನ್.ಹೆಚ್.ಎಂ ಅಡಿಯಲ್ಲಿ ಗುತ್ತಿಗೆ ಆಧಾರದಲ್ಲಿ ಹಾಗೂ ಕರೆ ಆಧಾರದಲ್ಲಿ (on call basis) ಸಹ ನೇಮಕಾತಿ ಮಾಡಲು ಅವಕಾಶ ಕಲ್ಪಿಸಿದೆ.

- ಹಾಗೆಯೇ, ವಯೋನಿವೃತ್ತಿ ಹೊಂದಿದ ತಜ್ಞರು ಹಾಗೂ ವೈದ್ಯರನ್ನು 65 ವರ್ಷ ವಯಸ್ಸಿನವರೆಗೆ ಪ್ರತೀ ವರ್ಷ ನವೀಕರಿಸುವ ಷರತ್ತಿಗೊಳಪಟ್ಟು ಗುತ್ತಿಗೆ ಆಧಾರದಲ್ಲಿ ಮರು ನೇಮಕಾತಿ ಮಾಡಿಕೊಳ್ಳಲು ಅವಕಾಶ ಕಲ್ಪಿಸಿದೆ.

- ಎಂ.ಬಿ.ಬಿ.ಎಸ್. ಪದವಿಯನ್ನು ಸರ್ಕಾರಿ ಕೋಟಾದಲ್ಲಿ ಪೂರ್ಣಗೊಳಿಸಿದ ವೈದ್ಯರುಗಳನ್ನು ಒಂದು ವರ್ಷ ಕಡ್ಡಾಯ ಗ್ರಾಮೀಣ ಸೇವೆಯಡಿಯಲ್ಲಿ ಸೇವೆ ಸಲ್ಲಿಸಲು ನೇಮಿಸಲಾಗುತ್ತಿದೆ ಹಾಗೂ ವೈದ್ಯರುಗಳನ್ನು ಖಾಲಿ ಹುದ್ದೆಗೆ ತಾತ್ಕಾಲಿಕವಾಗಿ ಗುತ್ತಿಗೆ ಆಧಾರದ ಮೇಲೆ ನೇಮಿಸಿಕೊಳ್ಳಲಾಗುತ್ತಿದೆ.

- ಕಿರಿಯ ವೈದ್ಯಕೀಯ ಪ್ರಯೋಗಶಾಲಾ ಟೆಕ್ನಾಲಜಿಸ್ಟ್/ಫಾರ್ಮಾಸಿಸ್ಟ್/ ಎಲೆಕ್ಟ್ರೀಷಿಯನ್ / ಸೋಷಿಯಲ್ ವರ್ಕರ್/ಡೆಂಟಲ್ ಮೆಕ್ಯಾನಿಕ್/ ಗ್ರೂಪ್-ಡಿ ಹುದ್ದೆಗಳಿಗೆ ಹೊರಗುತ್ತಿಗೆ ಆಧಾರದ ಮೇಲೆ ನೇಮಕ ಮಾಡಿಕೊಳ್ಳಲು ಸರ್ಕಾರದಿಂದ ಅನುಮತಿ ನೀಡಲಾಗಿದೆ.

- ಇಲಾಖೆಯ ವಿಶೇಷ ನೇರ ನೇಮಕಾತಿ ಸಮಿತಿ ಮುಖಾಂತರ 2017-18ನೇ ಸಾಲಿನಲ್ಲಿ ವಿವಿಧ ಅರೆ ವೈದ್ಯಕೀಯ ಹುದ್ದೆಗಳಲ್ಲಿ 1665 ಹುದ್ದೆಗಳನ್ನು ನೇಮಕಾತಿ ಮಾಡಿ ಆದೇಶ ಹೊರಡಿಸಲಾಗಿದೆ.

- ಕಿರಿಯ ಆರೋಗ್ಯ ಸಹಾಯಕರು (ಮಹಿಳೆ) -496 ಹುದ್ದೆಗಳಿಗೆ ಪೊಲೀಸ್ ಪೂರ್ವಾಪರ / ಜಾತಿ ಸಿಂಧುತ್ವ / ಹೈ-ಕ ಮೀಸಲಾತಿ ಸಿಂಧುತ್ವ ವರದಿಗಳು ಸ್ವೀಕೃತವಾದ ನಂತರ ಹಂತ ಹಂತವಾಗಿ ನೇಮಕಾತಿ ಆದೇಶ ನೀಡಲಾಗುವುದು ಮತ್ತು ಕ್ಷೇತ್ರ ಆರೋಗ್ಯ ಶಿಕ್ಷಣಾಧಿಕಾರಿಗಳು-62 ಹುದ್ದೆಗಳಿಗೆ ಹೊರ ರಾಜ್ಯದ ಆದೇಶ ನೀಡಲಾಗುವುದು ಮತ್ತು ಕ್ಷೇತ್ರ ಆರೋಗ್ಯ ಶಿಕ್ಷಣಾಧಿಕಾರಿಗಳು-62 ಹುದ್ದೆಗಳಿಗೆ ಹೊರರಾಜ್ಯದ ವಿಶ್ವವಿದ್ಯಾನಿಲಯಗಳಿಂದ ಪದವಿ ಪಡೆದಿರುವ ಅಭ್ಯರ್ಥಿಗಳ ಅಂಕಪಟ್ಟಿಗಳ ನೈಜತೆಯ ಬಗ್ಗೆ ಪತ್ರ ಬರೆಯಲಾಗಿದ್ದು, ಸ್ಪಷ್ಟ ಮಾಹಿತಿ ಬಂದ ನಂತರ ತಾತ್ಕಾಲಿಕ ಆಯ್ಕೆಪಟ್ಟಿ ತಯಾರಿಸಲಾಗುವುದು ಹಾಗೂ 889 ಶುಶ್ರೂಷಕರ ಹುದ್ದೆಗಳನ್ನು ಭರ್ತಿ ಮಾಡಲ ಮಾನ್ಯ ಕರ್ನಾಟಕ ಆಡಳಿತ ನ್ಯಾಯಮಂಡಳಿಯಲ್ಲಿ ದಾವೆ ಹೂಡಿದ್ದು, ಸದರಿ ನ್ಯಾಯಾಲಯದಲ್ಲಿ ತಡೆಯಾಜ್ಞೆ ಆದೇಶ ಇರುವ ಹಿನ್ನೆಲೆಯಲ್ಲಿ ಅಂತಿಮ ತೀರ್ಪು ಬಂದ ನಂತರ ನೇಮಕಾತಿ ಪ್ರಕ್ರಿಯೆ ಚಾಲನೆಗೊಳಿಸಲಾಗುವುದು.

- ಇಲಾಖೆಯಲ್ಲಿ ಖಾಲಿ ಇರುವ 177 ಪ್ರಥಮ ದರ್ಜೆ ಸಹಾಯಕರು ಮತ್ತು 143 ದ್ವಿತೀಯ ದರ್ಜೆ ಸಹಾಯಕರ ಹುದ್ದೆಗಳನ್ನು ಭರ್ತಿ ಮಾಡಲು ಆರ್ಥಿಕ ಇಲಾಖೆಯ ಅನುಮೋದನೆ ದೊರೆತಿದ್ದು, ಕರ್ನಾಟಕ ಲೋಕಸೇವಾ ಆಯೋಗದ ಮುಖಾಂತರ ಭರ್ತಿ ಮಾಡುವ ಸಲುವಾಗಿ ಪತ್ರ ಬರೆಯಲಾಗಿದೆ.